


# ಅಡಿಕೆ ಬೆಳೆಗಾರನಿಗಿದೆ ಅನೇಕ ಸವಾಲು: ಸಂಸದ ಕಾಗೇರಿ

## ಟಿಆರ್‌ಸಿಯಲ್ಲಿ ಕಾರ್ಯಾಗಾರ | ಪರ್ಯಾಯ ಬೆಳೆ ಮಾರ್ಗ ಅನುಸರಿಸಿ

**ಶಿರಸಿ ಸಮಾಚಾರ ⏭ ಶಿರಸಿ:** ಅಡಿಕೆ ಬೆಳೆ ಮುಂದೆ ಅನೇಕ ಸವಾಲುಗಳಿವೆ. ಅಡಿಕೆ ಆರೋಗ್ಯಕ್ಕೆ ಹಾನಿಕಾರಕ ಎಂಬ ಆರೋಪ ಇರುವುದರಿಂದ ಈ ತೊಡಕನ್ನು ಮೊದಲು ನಿವಾರಿಸಬೇಕಿದೆ. ಅಡಿಕೆ ಆರೋಗ್ಯಕ್ಕೆ ಹಾನಿಕಾರಕ ಅಲ್ಲ ಎಂಬ ಅಂಶವನ್ನು ವಿಶ್ವ ಆರೋಗ್ಯ ಸಂಸ್ಥೆಗೂ ಮನವರಿಕೆ ಮಾಡಿಕೊಡಬೇಕಿದೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

**ರೈತರಲ್ಲಿರುವ ಕೃಷಿ ಜ್ಞಾನ ಕೃಷಿ ವಿಜ್ಞಾನಿಗಳಿಗೂ ತಲುಪಬೇಕು. ಬೆಳೆಗಳಿಗೆ ಯೋಗ್ಯ ಬೆಲೆ ಸಿಕ್ಕರೆ ರೈತರು ಸಾಲ ಮನ್ನಾ ಬಗ್ಗೆ ಆಗ್ರಹಿಸುವುದಿಲ್ಲ. ಅಡಿಕೆ ಬೆಳೆಗಾರರಿಗೆ ಈ ವರ್ಷ ಕಷ್ಟದ ಕಾಲ. ಅತಿಯಾದ ಮಳೆಯಿಂದ ಅಡಕೆ ಬೆಳೆಗಾರರು ಕಷ್ಟಕ್ಕೆ ಬಿದ್ದಿದ್ದಾರೆ.**

**–ಶಿವರಾಮ ಹೆಬ್ಬಾರ್, ಶಾಸಕ**

ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಸಂಸ್ಥೆಯ ಸಹಕಾರದಲ್ಲಿ ಇಲ್ಲಿಯ ಟಿಆರ್‌ಸಿ ಸಭಾಭವನದಲ್ಲಿ ಶನಿವಾರ ಆಯೋಜಿಸಲಾಗಿದ್ದ ಅಡಿಕೆ ಹಾಗೂ ಕಾಳುಮೆಣಸಿನಲ್ಲಿ ರೋಗ ಮತ್ತು ಕೀಟ ನಿರ್ವಹಣೆಗೆ ಸುಸ್ಥಿರ ಬೇಸಾಯ ಕ್ರಮಗಳು ಹಾಗೂ ಉಪಬೆಳೆಗಳ ಕುರಿತ ಮಾಹಿತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅಡಿಕೆ ಬೆಳೆಗಾರರು ಇಂದು ವಿವಿಧ ರೀತಿಯ ಸಂಕಷ್ಟದಲ್ಲಿದ್ದಾರೆ. ಸರ್ಕಾರ ಅಡಕೆ ಬೆಳೆಗಾರರ ನೆರವಿಗೆ ಬರುವಂತೆ ಜನಾಭಿಪ್ರಾಯ ರೂಪಿಸುವ ಮೂಲಕ ಒತ್ತಡ ತರಬೇಕಾದ ಅಗತ್ಯವಿದೆ. ರಾಜ್ಯ ಸರ್ಕಾರ ಈ ಸಂದರ್ಭದಲ್ಲಿ ಅಡಿಕೆ ಬೆಳೆಗಾರರ ನೆರವಿಗೆ ಬರಲೇಬೇಕಿದೆ. ಕೇವಲ ರಾಜ್ಯ ಸರ್ಕಾರದಿಂದ ಮಾತ್ರ ಸಾಧ್ಯವಾಗಿದ್ದರೆ ಕೇಂದ್ರಕ್ಕೆ ಅಡಿಕೆ ಬೆಳೆಗಾರರ ಪರವಾಗಿ ಶಿಫಾರಸು ಮಾಡಲಿ, ಅಡಿಕೆ ಬೆಳೆಯುವ ಕ್ಷೇತ್ರಗಳ ಸಂಸದರು ನಾವು ಸಂಸತ್‌ನಲ್ಲಿ ಅಡಿಕೆ ಬೆಳೆಗಾರರ ಪರವಾಗಿ ಮಾತನಾಡಲಿದ್ದೇವೆ ಎಂದರು.

ಉತ್ತರ ಕನ್ನಡ ಜಿಲ್ಲೆ ಸಹಕಾರಿ ಕ್ಷೇತ್ರಕ್ಕೆ ಜಿಲ್ಲೆ ಹೆಸರಾಗಿದೆ. ಅಡಿಕೆ ಬೆಳೆಗಾರರ ನೆರವಿಗೆ ಬರಲು ಜಿಲ್ಲೆಯಲ್ಲಿ ಸಹಕಾರಿ ಸಂಘಗಳು, ರೈತ ಸಮುದಾಯ ಕೃಷಿ ಕುರಿತ ಚಿಂತನ ನಡೆಸುತ್ತಿವೆ. ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಯತ್ನವೂ ಆಗುತ್ತದೆ. ಆದರೆ, ಈಗ ಎದುರಿಸುತ್ತಿರುವ ಸಮಸ್ಯೆ ಸ್ಥಳೀಯ ಸಹಕಾರಿ ಸಂಘಗಳಿಂದ ಮಾತ್ರ ಪರಿಹಾರ ಸಾಧ್ಯವಾಗುವುದಿಲ್ಲ ಎಂದರು.

**ಅಡಿಕೆಯಲ್ಲಿ ಕುಬ್ಜ ತಳಿ ಸಂಶೋಧನೆ ಆಗಿದ್ದರೂ ನಿರೀಕ್ಷಿತ ಫಸಲು ಇರಲಿಲ್ಲ. ಪ್ಲಾಂಟೇಶನ್ ಕ್ರಾಪ್‌ಗಳೂ ಹವಾಮಾನ ವೈಪರೀತ್ಯದಿಂದಾಗಿ ಕೆಲ ರೋಗ ತಿಳಿಯುವುದಕ್ಕೂ ಮುನ್ನವೇ ವೇಗವಾಗಿ ಹಬ್ಬುತ್ತಿದೆ. ಎಲೆಚುಕ್ಕಿ ರೋಗ ಇದೇ ಮಾದರಿಯಲ್ಲಿ ಹಬ್ಬಿದೆ.**

**–ಬಾಲಚಂದ್ರ ಹೆಬ್ಬಾರ್, ಸಿಪಿಸಿಆರ್‌ಐ ನಿರ್ದೇಶಕ**

ಅಡಿಕೆ ಆರೋಗ್ಯಕ್ಕೆ ■ 2ನೇ ಪುಟಕ್ಕೆ

# ಅಡಿಕೆ ಬೆಳೆಗಾರನಿಗಿದೆ

ಹಾನಿಕಾರಕ ಅಲ್ಲ ಎಂಬುದನ್ನು ಧೃಡಪಡಿಸುವ ಸಂಶೋಧನೆಗಾಗಿ ಕೇಂದ್ರ ಸರ್ಕಾರ 10 ಕೋಟಿ ರೂ. ನೆರವು ನೀಡಿದೆ ಎಂದರು.

ಅಡಿಕೆ ಬೆಳೆ ವಿಸ್ತರಣೆ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗುತ್ತಿದೆ. ರಾಜ್ಯದ ಬೇರೆ ಜಿಲ್ಲೆಗಳಲ್ಲಿಯೂ ನೂರು ಇನ್ನೂರು ಎಕರೆ ಲೆಕ್ಕದಲ್ಲಿ ಅಡಕೆ ಬೆಳೆಯುತ್ತಿದ್ದಾರೆ. ಅಡಿಕೆ ವಿಸ್ತರಣೆ ಬಗ್ಗೆ ಗಂಭೀರವಾಗಿ ಚಿಂತಿಸಬೇಕಾಗಿದೆ. ಮಲೆನಾಡಿನವರಾದ ನಮಗೆ ಅಡಿಕೆ ಬಿಟ್ಟರೆ ಬೇರೆ ಬೆಳೆ ಇಲ್ಲ. ಹೀಗಾಗಿ, ಹೊರಗಿನ ಜಿಲ್ಲೆ, ರಾಜ್ಯದ ರೈತರಿಗೆ ಆದಾಯ ಜಾಸ್ತಿ ಬರುವ ಬೇರೆ ಬೆಳೆ ಬಗ್ಗೆ ತಿಳಿಸಿ, ಬೆಳೆಯಲು ಉತ್ತೇಜಿಸಬೇಕಾಗಿದೆ.

ಇನ್ನೊಂದೆಡೆ ಅಡಿಕೆಯ ಅಕ್ರಮ ಆಮದೂ ಸಹ ಮಾರುಕಟ್ಟೆಮೇಲೆ ಗಂಭೀರ ಪರಿಣಾಮ ಬೀರುತ್ತಿದೆ. ಅಡಿಕೆ ಆಮದಿನ ಮೇಲೆ ಕೇಂದ್ರ ಸರ್ಕಾರ ಶೇ. 350ರಷ್ಟು ತೆರಿಗೆ ವಿಧಿಸಿದ್ದರೂ, ಅಕ್ರಮವಾಗಿ ದೇಶದೊಳಗೆ ತರುತ್ತಿರುವುದು ಸಮಸ್ಯೆ ಆಗಿದೆ. ಕೇಂದ್ರ ಸರ್ಕಾರ ಗಡಿ ಬಿಗಿಗೊಳಿಸಿ, ಅಕ್ರಮ ಸಾಗಾಟ ನಿಯಂತ್ರಿಸಲು ಯತ್ನಿಸಿದ್ದರೂ ಶಿರಸಿ ಮಾರುಕಟ್ಟೆಯವರೆಗೂ ವಿದೇಶಿ ಅಡಿಕೆ ಬರುತ್ತಿದೆ. ಅಡಕೆ ನಿಯಂತ್ರಣ ಸವಾಲಿನ ವಿಷಯ. ರಾಜ್ಯ, ಕೇಂದ್ರ ಸೇರಿ ಹೇಗೆ ನಿಯಂತ್ರಣ ಮಾಡಬಹುದು ಎಂಬ ಬಗ್ಗೆ ಚಿಂತಿಸಬೇಕಿದೆ. ಅದೇ ರೀತಿ ಅಡಕೆ ಕೃಷಿಯಲ್ಲೂ ಯಂತ್ರೋಪಕರಣಗಳ ಇನ್ನಷ್ಟು ಶೋಧನೆ ನಡೆಸಿ ಖರ್ಚನ್ನೂ ಕಡಿಮೆಗೊಳಿಸಬೇಕಾಗಿದೆ ಎಂದರು.

ಶಾಸಕ ಶಿವರಾಮ ಹೆಬ್ಬಾರ್ ಮಾತನಾಡಿ, ರೈತರಲ್ಲಿರುವ ಕೃಷಿ ಜ್ಞಾನ ಕೃಷಿ ವಿಜ್ಞಾನಿಗಳಿಗೂ ತಲುಪಬೇಕು. ಬೆಳೆಗಳಿಗೆ ಯೋಗ್ಯ ಬೆಲೆ ಸಿಕ್ಕರೆ ರೈತರು ಸಾಲ ಮನ್ನಾ ಬಗ್ಗೆ ಆಗ್ರಹಿಸುವುದಿಲ್ಲ. ಅಡಿಕೆ ಬೆಳೆಗಾರರಿಗೆ ಈ ವರ್ಷ ಕಷ್ಟದ ಕಾಲ. ಅತಿಯಾದ ಮಳೆಯಿಂದ ಅಡಕೆ ಬೆಳೆಗಾರರು ಕಷ್ಟಕ್ಕೆ ಬಿದ್ದಿದ್ದಾರೆ. ಆಂಧ್ರ ತಮಿಳುನಾಡಿನಲ್ಲಿ 46 ಸಾವಿರ ಹೆಕ್ಟೇರ್ ಪ್ರತಿ ರಾಜ್ಯದಲ್ಲಿ ಬೆಳೆಯುತ್ತಿದ್ದು, ಇನ್ನೆರಡು ವರ್ಷಗಳಲ್ಲಿ ಫಸಲು ಬರಲಿದೆ. ಹಾವೇರಿ ಶಿಗ್ಗಾಂವ್‌ನಂತಹ ತಾಲೂಕುಗಳೂ ಶಿರಸಿಯನ್ನು ಮೀರಿಸುವ ಮಟ್ಟದಲ್ಲಿ ಬೆಳೆಯಲಿವೆ. ಹೀಗಾಗಿ, ಮಲೆನಾಡಿನ ರೈತರು ಬದಲಿ ಬೆಳೆಯ ಬಗ್ಗೆಯೂ ಸಹ ಈಗಲೇ ಚಿಂತನೆ ನಡೆಸಬೇಕಿದೆ ಎಂದರು.

ಸಿಪಿಸಿಆರ್‌ಐ ನಿರ್ದೇಶಕ ಬಾಲಚಂದ್ರ ಹೆಬ್ಬಾರ್ ಪ್ರಾಸ್ತಾವಿಕ ಮಾತನಾಡಿ, ಅಡಿಕೆಯಲ್ಲಿ ಕುಬ್ಜ ತಳಿ ಸಂಶೋಧನೆ ಆಗಿದ್ದರೂ ನಿರೀಕ್ಷಿತ ಫಸಲು ಇರಲಿಲ್ಲ. ಪ್ಲಾಂಟೇಶನ್ ಕ್ರಾಪ್‌ಗಳೂ ಹವಾಮಾನ ವೈಪರೀತ್ಯದಿಂದಾಗಿ ಕೆಲ ರೋಗ ತಿಳಿಯುವುದಕ್ಕೂ ಮುನ್ನವೇ ವೇಗವಾಗಿ ಹಬ್ಬುತ್ತಿದೆ. ಎಲೆಚುಕ್ಕಿ ರೋಗ ಇದೇ ಮಾದರಿಯಲ್ಲಿ ಹಬ್ಬಿದೆ. ಎಲೆಚುಕ್ಕಿ ನಿಯಂತ್ರಣಕ್ಕೆ ನಾವು ತೋಟವನ್ನು ಯಾವ ರೀತಿ ನಿರ್ವಹಣೆ ಮಾಡಬೇಕು ಎಂಬುದೂ ಮುಖ್ಯವಾಗುತ್ತದೆ. 25 ಡಿಗ್ರೀ ತಾಪಮಾನ, ಶೇ.75 ಕ್ಕಿಂತ ಜಾಸ್ತಿ ಆದ್ರತೆ ಇದ್ದ ವಾತಾವರಣದಲ್ಲಿ ಎಲೆ ಚುಕ್ಕಿ ಜಾಸ್ತಿ ಪ್ರಸಾರವಾಗಿದೆ. ಹೊಸ ಎಲೆ ಜಾಸ್ತಿ ಬರುವಂತೆ ಮತ್ತು ಎಲೆ ಚುಕ್ಕಿ ಹೊಸ ಎಲೆಗೆ ಹಬ್ಬದಂತೆ ನೋಡಿಕೊಳ್ಳಬೇಕು. ಚೈನೀಸ್ ರಿಂಗ್ ಸ್ಪಾಟ್ ವೈರಸ್ ಉತ್ತರಕನ್ನಡ, ಬೆಳ್ತಂಗಡಿಯಲ್ಲೂ ಕಾಣಿಸಿಕೊಂಡಿದೆ. ಈ ವೈರಸ್ ಬಗ್ಗೆ ಇನ್ನಷ್ಟು ಶೋಧ ಆಗಬೇಕು. ಹರಡುವಿಕೆಯ ಕೀಟ ಯಾವುದು ಎಂಬುದನ್ನು ಶೋಧ ಮಾಡುತ್ತಿದ್ದೇವೆ. ಅಡಿಕೆ ಆರೋಗ್ಯಕ್ಕೆ ಹಾನಿಕಾರಕ ಎಂಬ ಆರೋಪ ಸದಾ ಕೇಳಿಬರುತ್ತಿದೆ. ಬೇರೆ ವಸ್ತುಗಳ ಜೊತೆ ಮಿಶ್ರಣ ಮಾಡಿ ಅಡಿಕೆ ಬಳಸುವುದರಿಂದ ಆರೋಗ್ಯ ಸಮಸ್ಯೆ ಉಂಟಾಗಿದೆ ಹೊರತೂ ಅಡಿಕನ್ನಷ್ಟೇ ಬಳಸಿದವರು ಆರೋಗ್ಯವಾಗಿದ್ದಾರೆ. ಈ ಕುರಿತೂ ಸಂಶೋಧನೆ ನಡೆಸಲಿದ್ದೇವೆ ಎಂದರು.

ಟಿಎಸ್‌ಎಸ್ ಅಧ್ಯಕ್ಷ ಗೋಪಾಲಕೃಷ್ಣ ವೈದ್ಯ, ಟಿಎಂಎಸ್ ಅಧ್ಯಕ್ಷ ಜಿ.ಟಿ.ಹೆಗಡೆ, ಟಿಆರ್‌ಸಿ ಅಧ್ಯಕ್ಷ ಶ್ರೀಪಾದ ಹೆಗಡೆ ಕಡವೆ, ಸಾಂಬಾರು ಮಂಡಳಿ ಉಪನಿರ್ದೇಶಕ ಬಾಬುಲಾಲ್ ಮೀನಾ, ಶಂಭುಲಿಂಗ ಹೆಗಡೆ, ಸತೀಶ ಹೆಗಡೆ, ರೂಪಾ ಪಾಟೀಲ ಸೇರಿದಂತೆ ಹಲವರು ಇದ್ದರು.